**ಕರ್ನಾಟಕ ಸರ್ಕಾರ**

**ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, ಸಂಪಿಗೆ ರಸ್ತೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು–12.**

ಸಂಖ್ಯೆ: ಪಪೂಶಿಇ/ಪರೀಕ್ಷೆ/ವಿ.ಭಾ.ನ್ಯೂ/2018–19. ದಿನಾಂಕ: 10.07.2019.

**ಜ್ಞಾಪನ**

ವಿಷಯ: ಜೂನ್–2019ರ ದ್ವಿತೀಯ ಪಿಯುಸಿ ಪೂರಕ ಪರೀಕ್ಷೆಯಲ್ಲಿ ತೇರ್ಗಡೆಯಾದ ವಿದ್ಯಾರ್ಥಿಗಳ ಭಾವಚಿತ್ರದಲ್ಲಿರುವ ನ್ಯೂನತೆಯ ಬಗ್ಗೆ.

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಜೂನ್ 2019ರ ದ್ವಿತೀಯ ಪಿಯುಸಿ ಪರೀಕ್ಷೆಗೆ ಹಾಜರಾಗಿರುವ ವಿದ್ಯಾರ್ಥಿಗಳ ಮಾಹಿತಿಯನ್ನು (ವಿದ್ಯಾರ್ಥಿಯ ಹೆಸರು, ತಂದೆ ತಾಯಿಯ ಹೆಸರು SSLC ಅಂಕಪಟ್ಟಿಯಲ್ಲಿರುವಂತೆ ವಿದ್ಯಾರ್ಥಿ ತೆಗೆದುಕೊಂಡಿರುವ ಸಂಯೋಜನೆ, ಭಾಷಾ ಹಾಗೂ ವಿಷಯಗಳು, ಮಾಧ್ಯಮ) ಭಾವಚಿತ್ರ ಇತ್ಯಾದಿಗಳನ್ನು ಪ್ರಾಂಶುಪಾಲರೇ ಖುದ್ದಾಗಿ ಪರಿಶೀಲಿಸಿ ನ್ಯೂನತೆಗಳಿದ್ದಲ್ಲಿ ಪೂರಕ ದಾಖಲೆಗಳೊಂದಿಗೆ ದಿನಾಂಕ 20.07.2019ರೊಳಗೆ ಕೇಂದ್ರ ಕಛೇರಿಯನ್ನು ಸಂಪರ್ಕಿಸಲು ಸೂಚಿಸಲಾಗಿದೆ.

ಈಗಲೂ ಸಹ ವಿದ್ಯಾರ್ಥಿಗಳ ಭಾವಚಿತ್ರಗಳಲ್ಲಿ ನ್ಯೂನತೆಯಿರುವ ಬಗ್ಗೆ ಇಲಾಖೆಗೆ ದೂರುಗಳು ಬಂದಿರುತ್ತದೆ. ಈ ನ್ಯೂನತೆಗಳು ಅಂಕಪಟ್ಟಿಯಲ್ಲಿಯೂ ಸಹ ಮುಂದುವರೆದು ವಿದ್ಯಾರ್ಥಿಗಳಿಗೆ ಹಾಗೂ ಪೋಷಕರಿಗೆ ಸಮಸ್ಯೆಯನ್ನು ಸೃಷ್ಟಿಸುತ್ತದೆ. ಈ ಹಿನ್ನೆಲೆಯಲ್ಲಿ ಇಲಾಖೆಯು ನ್ಯೂನತೆಗಳನ್ನು ಸರಿಪಡಿಸಲು ಕೊನೆಯ ಅವಕಾಶ ನೀಡುತ್ತಿದ್ದು, **ಇಲಾಖಾ Online Portalನ್ನು ದಿನಾಂಕ 10.07.2019 ರಿಂದ 20.07.2019 ರವರೆಗೆ ತೆರೆಯುತ್ತಿದ್ದು,** ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಯಲ್ಲಿ ತೇರ್ಗಡೆಯಾದ ಎಲ್ಲಾ ವಿದ್ಯಾರ್ಥಿಗಳ ಭಾವಚಿತ್ರಗಳನ್ನು ಪ್ರಾಂಶುಪಾಲರೇ ಖುದ್ದಾಗಿ ಪರಿಶೀಲಿಸಿ ಸರಿಪಡಿಸಲು ಅವಕಾಶ ನೀಡಿದೆ. **ವಿದ್ಯಾರ್ಥಿಗಳ ಮಾಹಿತಿಗಳಲ್ಲಿ ನ್ಯೂನತೆಗಳಿದ್ದಲ್ಲಿ ದಿನಾಂಕ 20.07.2019 ರೊಳಗೆ ಪ್ರಾಂಶುಪಾಲರೇ ಖುದ್ದಾಗಿ ವಿದ್ಯಾರ್ಥಿಗಳ ಪೂರಕ ದಾಖಲೆಗಳೊಂದಿಗೆ ಇಲಾಖೆಯನ್ನು ಸಂಪರ್ಕಿಸಲು ಸೂಚಿಸಿದೆ.**

ಭಾವಚಿತ್ರಗಳಲ್ಲಿ ನ್ಯೂನತೆಗಳಿದ್ದಲ್ಲಿ ಇತ್ತೀಚಿನ ಭಾವಚಿತ್ರವನ್ನು Scan ಮಾಡಿ Online Portal ನಲ್ಲಿ ಅಳವಡಿಸಲು ಸೂಚಿಸಿದೆ. ಜುಲೈ ತಿಂಗಳ ಅಂತ್ಯದೊಳಗೆ ತೇರ್ಗಡೆಯಾದ ಎಲ್ಲಾ ವಿದ್ಯಾರ್ಥಿಗಳ ಅಂಕಪಟ್ಟಿಗಳನ್ನು ವಿತರಿಸಲು ಕ್ರಮಕೈಗೊಳ್ಳಲಾಗುತ್ತಿದೆ. ನಿಗಧಿತ ದಿನಾಂಕದೊಳಗೆ ನ್ಯೂನತೆಗಳನ್ನು ಸರಿಪಡಿಸದಿದ್ದಲ್ಲಿ ಮುಂದಿನ ಎಲ್ಲಾ ಆಗುಹೋಗುಗಳಿಗೆ ಪ್ರಾಂಶುಪಾಲರೇ ಸಂಪೂರ್ಣ ಜವಾಬ್ದಾರಾಗಿರುತ್ತಾರೆ. ಈ ವಿಷಯಕ್ಕೆ ಸಂಬಂಧಿಸಿದಂತೆ ಪ್ರಾಂಶುಪಾಲರುಗಳು ಈ ಕೆಳಕಂಡ ಪರೀಕ್ಷಾ ಶಾಖೆಯ ಅಧೀಕ್ಷಕರುಗಳನ್ನು ಸಂಪರ್ಕಿಸಲು ಸೂಚಿಸಿದೆ.

| ಕ್ರ ಸಂ. | ಅಧೀಕ್ಷಕರುಗಳ ವಿವರ | ಮೊಬೈಲ್ ಸಂಖ್ಯೆ. | ಜಿಲ್ಲೆಗಳು |
|---|---|---|---|
| 1. | ಶ್ರೀ ಸಿಂಜಾವ್ ಅಧೀಕ್ಷಕರು (ಪರೀಕ್ಷೆ) | 9449327820 | ಬೆಂಗಳೂರು ಉತ್ತರ, ಬೆಂಗಳೂರು ದಕ್ಷಿಣ, ಬೆಂಗಳೂರು ಗ್ರಾಮಾಂತರ ರಾಮನಗರ, ತುಮಕೂರು, ಕೋಲಾರ, ದಾವಣಗೆರೆ, ಶಿವಮೊಗ್ಗ, ಚಿತ್ರದುರ್ಗ ಮತ್ತು ಚಿಕ್ಕಬಳ್ಳಾಪುರ |
| 2. | ಶ್ರೀ ಪರಶಿವಪ್ಪ ಅಧೀಕ್ಷಕರು (ಪರೀಕ್ಷೆ) | 9916902726 | ಮೈಸೂರು, ಚಾಮರಾಜನಗರ, ಕೊಡಗು, ಉಡುಪಿ, ಮಂಗಳೂರು, ಮಂಡ್ಯ, ಹಾಸನ ಮತ್ತು ಚಿಕ್ಕಮಗಳೂರು, |
| 3. | ಶ್ರೀಮತಿ ರಾಧಮ್ಮ ಅಧೀಕ್ಷಕರು (ಪರೀಕ್ಷೆ) | 9731058549 | ಬೆಳಗಾಂ, ಚಿಕ್ಕೋಡಿ, ಧಾರವಾಡ, ಬಾಗಲಕೋಟೆ, ಗದಗ್, ಹಾವೇರಿ, ಬಿಜಾಪುರ ಮತ್ತು ಕಾರವಾರ. |
| 4. | ಶ್ರೀ ಮಹಮದ್ ನೂರುಲ್ಲಾ ಅಧೀಕ್ಷಕರು (ಪರೀಕ್ಷೆ) | 9448681040 | ಕಲ್ಬುರ್ಗಿ, ಯಾದಗಿರಿ, ಕೊಪ್ಪಳ, ಬಳ್ಳಾರಿ, ಬೀದರ್ ಮತ್ತು ರಾಯಚೂರು. |

**PHOTO ಬದಲಾವಣೆಗಾಗಿ ON-LINE PORTAL ಬಗ್ಗೆ ವಿಚಾರಣೆಗಾಗಿ :**

| ಕ್ರಮ ಸಂಖ್ಯೆ | ಅಧಿಕಾರಿ / ಸಿಬ್ಬಂದಿಯ ಹೆಸರು | ಮೊಬೈಲ್ ಸಂಖ್ಯೆ |
|---|---|---|
| 1. | ಶ್ರೀ ಬಾಲಾಜಿ ಪಿ. ವೈ, ದ್ವಿ.ದ.ಸ. | 8892562073 |
| 2. | ಶ್ರೀ ವಿನಯ್ ಕಂಪ್ಯೂಟರ್ ಪ್ರೋಗ್ರಾಮರ್ | 8971644416 |

**ದಿನಾಂಕ: 20.07.2019ರ ನಂತರ ಯಾವುದೇ ಬದಲಾವಣೆಗೆ ಅವಕಾಶವಿರುವುದಿಲ್ಲ.**

Lakshmi 11/7/19
ಜಂಟಿನಿರ್ದೇಶಕರು (ಪರೀಕ್ಷೆ)
ಪದವಿ ಪೂರ್ವ ಶಿಕ್ಷಣ ಇಲಾಖೆ.

ಪ್ರತಿಗಳು:

1. ಪದವಿ ಪೂರ್ವ ಶಿಕ್ಷಣ ಇಲಾಖೆಯ ಎಲ್ಲಾ ಜಿಲ್ಲೆಗಳ ಉಪನಿರ್ದೇಶಕರಿಗೆ – ಮಾಹಿತಿಗಾಗಿ ಹಾಗೂ ಒಂದು ಪ್ರತಿಯನ್ನು ಕಛೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲು ತಿಳಿಸಿದೆ.
2. ಪದವಿ ಪೂರ್ವ ಶಿಕ್ಷಣ ಬೋಧಿಸುವ ರಾಜ್ಯದ ಎಲ್ಲಾ ಪದವಿ ಪೂರ್ವ ಕಾಲೇಜುಗಳ ಪ್ರಾಚಾರ್ಯರಿಗೆ. (ವಿದ್ಯಾರ್ಥಿಗಳಿಗೆ ಈ ಕುರಿತು ಸೂಕ್ತ ನಿರ್ದೇಶನ ನೀಡಲು)
3. ನಿರ್ದೇಶನಾಲಯದ ಎಲ್ಲಾ ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗದವರಿಗೆ.
4. ಗಣಕ ಶಾಖೆಗೆ.
5. ಇಲಾಖಾ ಇ-ಆಡಳಿತ ಶಾಖೆ, (ಇಲಾಖಾ ವೆಬ್ ಸೈಟ್‌ನಲ್ಲಿ ಪ್ರಕಟಿಸಲು).
6. ಕಛೇರಿ ಪ್ರತಿ.